# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 481 |
| ಸದಸ್ಯರ ಹೆಸರು | : | ಶ್ರೀ ಸಲೀಂ ಅಹಮದ್<br>(ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 22-12-2022 |
| ಉತ್ತರಿಸುವವರು | : | ಸನ್ಮಾನ್ಯ ಮುಖ್ಯಮಂತ್ರಿಗಳು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಯಾವ ಯಾವ ಪ್ರದೇಶಗಳನ್ನು ಹುಲಿ ಸಂರಕ್ಷಿತ ಪ್ರದೇಶಗಳನ್ನಾಗಿ ಗುರುತಿಸಲಾಗಿದೆ: (ಜಿಲ್ಲಾವಾರು ಮಾಹಿತಿ ನೀಡುವುದು) | ರಾಜ್ಯದಲ್ಲಿನ ಹುಲಿ ಸಂರಕ್ಷಿತ ಪ್ರದೇಶಗಳ ವಿವರ ಈ ಕೆಳಗಿನಂತಿರುತ್ತದೆ.<br><br>**ಕ್ರ.ಸಂ** / **ಜಿಲ್ಲೆ** / **ಹುಲಿ ಸಂರಕ್ಷಿತ ಪ್ರದೇಶ**<br>1 / ಚಾಮರಾಜನಗರ / ಬಂಡೀಪುರ<br>2 / ಮೈಸೂರು/ಕೊಡಗು / ನಾಗರಹೊಳೆ<br>3 / ಚಾಮರಾಜನಗರ / ಬಿ.ಆರ್.ಟಿ<br>4 / ಉತ್ತರ ಕನ್ನಡ / ಕಾಳಿ<br>5 / ಚಿಕ್ಕಮಗಳೂರು / ಭದ್ರಾ |
| ಆ) | ನಮ್ಮ ದೇಶದಲ್ಲಿಯೇ ನಮ್ಮ ರಾಜ್ಯವು ಅತೀ ಹೆಚ್ಚು ಹುಲಿಯನ್ನು ಹೊಂದಿರುವ ಎರಡನೇ ರಾಜ್ಯವಾಗಿದ್ದು, ಹುಲಿ ಸಂರಕ್ಷಿತ ಪ್ರದೇಶಗಳನ್ನು ಅಭಿವೃದ್ಧಿಪಡಿಸಲು ಹಣದ ಕೊರತೆಯನ್ನು ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ನೀಡುವ ಅನುದಾನದಿಂದ ರಾಜ್ಯದ ಹುಲಿ ಸಂರಕ್ಷಿತ ಪ್ರದೇಶಗಳ ರಕ್ಷಣೆ ಮತ್ತು ನಿರ್ವಹಣೆ ಮಾಡಲಾಗುತ್ತಿದ್ದು, ಪ್ರಸ್ತುತ ಅನುದಾನದ ಕೊರತೆ ಇರುವುದಿಲ್ಲ. |
| ಇ) | ಪ್ರಸ್ತುತ ಈ ಹುಲಿ ಸಂರಕ್ಷಿತ ಯೋಜನೆಗಳಿಗೆ ರಾಷ್ಟ್ರೀಯ ಹುಲಿ ಸಂರಕ್ಷಿತ ಪ್ರಾಧಿಕಾರ ಅನುಮೋದನೆಯನ್ನು ನೀಡದೆ ಇರುವುದರ ವಿಚಾರದಲ್ಲಿ ಹಾಗೂ ನಮ್ಮ ರಾಜ್ಯದಲ್ಲಿ ಹುಲಿ ಸಂರಕ್ಷಿತ ಪ್ರದೇಶಗಳನ್ನು ಅಭಿವೃದ್ಧಿ, ವನ್ಯಜೀವಿಗಳ ರಕ್ಷಣೆಗಾಗಿ ಸರ್ಕಾರದ ಮುಂದಿರುವ ಕ್ರಮವೇನು? | ರಾಜ್ಯದ ಹುಲಿ ಸಂರಕ್ಷಿತ ಪ್ರದೇಶಗಳ ರಕ್ಷಣೆ ಮತ್ತು ನಿರ್ವಹಣೆಗಾಗಿ ಈ ಕೆಳಕಂಡ ಯೋಜನೆಗಳಡಿ ಅನುದಾನವನ್ನು ಒದಗಿಸಲಾಗುತ್ತಿದೆ.<br><br>1. ಕೇಂದ್ರ ಪುರಸ್ಕೃತ ಹುಲಿ ಯೋಜನೆ.<br>2. ರಾಜ್ಯ ವಲಯದ ಪ್ರಾಕೃತಿಕ ವನ್ಯಜೀವಿ ಸಂರಕ್ಷಣೆ.<br>3. ವನ್ಯಜೀವಿ ಆವಾಸಸ್ಥಾನಗಳ ನಿರ್ವಹಣೆ<br>4. ಮಾನವ-ವನ್ಯಪ್ರಾಣಿ ಸಂಘರ್ಷ ನಿಯಂತ್ರಣ-ಪ್ರಧಾನ ಕಾಮಗಾರಿಗಳು.<br><br>ಪ್ರಸಕ್ತ ಆರ್ಥಿಕ ವರ್ಷದಲ್ಲಿ ಕೇಂದ್ರ ಪುರಸ್ಕೃತ ಹುಲಿ ಯೋಜನೆಯಡಿ ರಾಜ್ಯ ಪಾಲಿನ ಅನುದಾನದಲ್ಲಿ ಕಳ್ಳಬೇಟೆ ಶಿಬಿರಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಹೊರಗುತ್ತಿಗೆ ನೌಕರರ ವೇತನ ಪಾವತಿಗಾಗಿ ಒಟ್ಟು ರೂ. 500 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| | | ರಾಷ್ಟ್ರೀಯ ಹುಲಿ ಸಂರಕ್ಷಣಾ ಪ್ರಾಧಿಕಾರವು ಕೇಂದ್ರ ಪುರಸ್ಕೃತ ಹುಲಿ ಯೋಜನೆಯಡಿ ನಾಗರಹೊಳೆ ಮತ್ತು ಕಾಳಿ ಹುಲಿ ಸಂರಕ್ಷಿತ ಪ್ರದೇಶದ ವಾರ್ಷಿಕ ಕ್ರಿಯಾ ಯೋಜನೆಯನ್ನು ಅನುಮೋದಿಸಿರುತ್ತದೆ. ಈ ಅನುಮೋದಿತ ಕ್ರಿಯಾಯೋಜನೆಯನ್ವಯ ಕೇಂದ್ರ ಮತ್ತು ರಾಜ್ಯದ ಪಾಲಿನ ಪ್ರಥಮ ಕಂತಿನ ಅನುದಾನವನ್ನು ರಾಜ್ಯ ಸರ್ಕಾರದಿಂದ ಬಿಡುಗಡೆಗೊಳಿಸಲು ಕ್ರಮವಹಿಸಲಾಗುತ್ತಿದೆ.<br><br>ರಾಷ್ಟ್ರೀಯ ಹುಲಿ ಸಂರಕ್ಷಣಾ ಪ್ರಾಧಿಕಾರ ರವರು ಬಂಡೀಪುರ, ಬಿ.ಆರ್.ಟಿ ಮತ್ತು ಭದ್ರಾ ಹುಲಿ ಸಂರಕ್ಷಿತ ಪ್ರದೇಶದ ವಾರ್ಷಿಕ ಕ್ರಿಯಾ ಯೋಜನೆಗಳ ಕುರಿತು ಕೋರಿರುವ ಹೆಚ್ಚುವರಿ ಮಾಹಿತಿಯನ್ನು ಸಲ್ಲಿಸಲಾಗಿದ್ದು, ಸದರಿ ವಾರ್ಷಿಕ ಕ್ರಿಯಾ ಯೋಜನೆಗೆ ಸದರಿ ಪ್ರಾಧಿಕಾರದ ಅನುಮೋದನೆಯನ್ನು ನಿರೀಕ್ಷಿಸಲಾಗಿದೆ. |

**ಸಂಖ್ಯೆ: ಅಪಜೀ 181 ಎಫ್‌ಡಬ್ಲ್ಯೂಎಲ್ 2022**

**(ಬಸವರಾಜ ಬೊಮ್ಮಾಯಿ)**
ಮುಖ್ಯಮಂತ್ರಿ